ನಂದೀದುರ್ಗದ ಡಿವಿಜ್ ಡಿಸ್ಟ್ರಿಕ್ಟ್ ಜಡ್ಜಿಯವರ ಕೋರ್ಟಿನಲ್ಲಿ.

ಸ್ ೧೮೯೬—97ನೇ ಇಸವಿ ಮಿಸಲೇನಿಯಸ್ ಅರ್ಜೀ ನಂಬರ್ 10.

ಮೃತಪಟ್ಟ ರೆಸಿಡೆನ್ಸಿ ರಾಮುಸ್ವಾಮಯ್ಯಂಗಾರ್‌ರವರ ಆಸ್ತೀ ವಿಷಯದಲ್ಲಿ—

ಅರ್ಜೀದಾರು, ಅವೃತಮಹಲ್ ಆಫಿಸಿನ ಬಿ. ಗೋಪಾಲಯ್ಯಂಗಾರ್‌ರವರು, ಮೃತಪಟ್ಟ ಸದರೀ ರಾಮುಸ್ವಾಮಯ್ಯಂಗಾರ್‌ರವರಿಗೆ ಸಹೋದರರು ಆಗಬೇಕೆಂಬ ಹಕ್ಕುದಾರಿ ಮೇಲೆ ಬೆಂಗಳೂರು ಸ್ಥಳದ ಬಿ. ಗೋಪಾಲಯ್ಯಂಗಾರ್‌ರವರು, ಬೆಂಗಳೂರು ನುನವಾರ್ತೆಪೇಟೆ ವಾಸಸ್ಥರಾಗಿ ಮೃತಪಟ್ಟ ರಾಮುಸ್ವಾಮಯ್ಯಂಗಾರ್‌ರವರ ಜಿಂದಗಿ ಬಗ್ಯಾಗಿ ಬರತಕ್ಕ ಸಾಲವನ್ನು ವಸೂಲ್ ಮಾಡುವದಕ್ಕೆ ಸ್ ೧೮೬೦ನೇ ಇಸವಿ 27ನೇ ಆಕ್ಟು ಮೇರಿಗೆ ಸರಟಿಫಿಕೇಟ್ ಬಗ್ಯೆ ಈ ಕೋರ್ಟಿಗೆ ಖಾಯಿಷ್ ಮಾಡಿರುತ್ತಾರೆ.

ಸದರೀ ದರಖಾಸ್ತುದಾರರಾದ ಗೋಪಾಲಯ್ಯಂಗಾರ್ ಅರ್ಜಿಯನ್ನು ಸ್ ೧೮೯೬ನೇ ಇಸವಿ ಆಗಸ್ಟ್ ತಿಂಗಳ ತಾರೀಖು 10ರಲ್ಲು ಕೇಳಿ ಸರ್ಟಿಫಿಕೇಟ್ ಪಡೆಯತಕ್ಕ ಬಾಧ್ಯತೆಯನ್ನ ವಿಮರ್ಶೆ ಮಾಡಲ್ಪಡುತ್ತೆ. ಆ ಕಾಲದಲ್ಲಿ ಸದರೀ ಮೃತಪಟ್ಟ ರಾಮುಸ್ವಾಮಯ್ಯಂಗಾರ್‌ರವರ ಆಸ್ತಿಗೆ ಹಕ್ಕುದಾರರಾದ ವಿಸಿಷ್ಟರೂ ಈ ಕೋರ್ಟಿನಲ್ಲಿ ಹಾಜರ್ ಇರಬೇಕೆಂದು ಇದರಿಂದ ತಿಳಿಯಪಡಿಸಿ ಇದೆ.

ಸ್ ೧೮೯೬—97ನೇ ಇಸವಿ ಅರ್ಜೀ ನಂಬರ್ 11.

ಮೃತಪಟ್ಟ ಚನ್ನಮ್ಮನವರ ಆಸ್ತೀ ವಿಷಯದಲ್ಲಿ—

ಚಿಕ್ಕಬಳ್ಳಾಪುರದಲ್ಲಿರುವ ಮೇಲ್ಕಂಡ ಘಾತಿ ಚನ್ನಮ್ಮನವರ ಮಗಳು ಕೇಷವಮ್ಮ ಮೈನರ್, ಗಾರ್ಡಿಯರ್ ಮತ್ತು ಗಂಡ ಚಿಕ್ಕಬಳ್ಳಾಪುರದ ಸಬ್ ಡಿವಿಜ್ ಆಫಿಸಿನಲ್ಲಿರುವ ಎಲ್. ಶ್ರೀನಿವಾಸಯ್ಯಂಗಾರು, ಮೃತಪಟ್ಟ ಸದರೀ ಚನ್ನಮ್ಮನವರಿಗೆ ಅಳಿಯನು ಆಗಬೇಕೆಂಬ ಹಕ್ಕುದಾರಿ ಮೇಲೆ ಚಿಕ್ಕಬಳ್ಳಾಪುರ ಸ್ಥಳದ ಎಲ್. ಶ್ರೀನಿವಾಸಯ್ಯಂಗಾರು, ಚಿಕ್ಕಬಳ್ಳಾಪುರ ವಾಸಸ್ಥರಾಗಿ ಮೃತಪಟ್ಟ ಚನ್ನಮ್ಮನವರ ಜಿಂದಗಿ ಬಗ್ಯಾಗಿ ಬರತಕ್ಕ ಸಾಲವನ್ನು ವಸೂಲ್ ಮಾಡುವದಕ್ಕೆ ಸ್ ೧೮೬೦ನೇ ಇಸವಿ 27ನೇ ಆಕ್ಟು ಮೇರಿಗೆ ಸರ್ಟಿಫಿಕೇಟ್ ಬಗ್ಯೆ ಈ ಕೋರ್ಟಿಗೆ ಖಾಯಿಷ್ ಮಾಡಿರುತ್ತಾರೆ.

ಸದರೀ ದರಖಾಸ್ತುದಾರರಾದ ಎಲ್. ಶ್ರೀನಿವಾಸಯ್ಯಂಗಾರ್ ಅರ್ಜಿಯನ್ನು ಸ್ ೧೮೯೬ನೇ ಇಸವಿ ಆಗಸ್ಟ್ ತಿಂಗಳ ತಾರೀಖು 10ರಲ್ಲು ಕೇಳಿ ಸರಟಿಫಿಕೇಟ್ ಪಡೆಯತಕ್ಕ ಬಾಧ್ಯತೆಯನ್ನ ವಿಮರ್ಶೆ ಮಾಡಲ್ಪಡುತ್ತೆ. ಆ ಕಾಲದಲ್ಲಿ ಸದರೀ ಮೃತಪಟ್ಟ ಚನ್ನಮ್ಮನವರ ಆಸ್ತಿಗೆ ಹಕ್ಕುದಾರರಾದ ವಿಸಿಷ್ಟರೂ ಈ ಕೋರ್ಟಿನಲ್ಲಿ ಹಾಜರ್ ಇರಬೇಕೆಂದು ಇದರಿಂದ ತಿಳಿಯಪಡಿಸಿ ಇದೆ.

ಸ್ ೧೮೯೬ನೇ ಇಸವಿ ಜುಲೈ ತಿಂಗಳ 10ನೇ ತಾರೀಖಿನಲ್ಲಿ ಕೋರ್ಟ್ ವೊಹರಿನಿಂ ನಮ್ಮ ದಸ್ತಖತ್ತೊಡನೆ ಕೊಡೋಣಾಗಿದೆ.

ಟಿ. ನರಹರಿರಾವ್,
ಡಿಸ್ಟ್ರಿಕ್ಟ್ ಜಡ್ಜ್.

ಬೆಂಗಳೂರು ಡಿಸ್ಟ್ರಿಕ್ಟ್.

ತಾರೀಖು 1ನೇ ಜುಲೈ 1896.

ಇದರಿಂದ ಸಮಸ್ತ ಜನಗಳಿಗೂ ತಿಳಿಯಪಡಿಸುವದೇನಂದರೆ,—ಬೆಂಗಳೂರು ಡಿಸ್ಟ್ರಿಕ್ಟು ನೆಲವಂಗಲದ ತಾಲ್ಲೂಕು ಗ್ರಾಮಾಂತ್ರಗಳಲ್ಲಿರುವ ಕುರಂಗದ ಕಲ್ಲು ದುರ್ಮುಖಿಸಂವತ್ಸರದ ಬಾಬನ್ನು, 1896ನೇ ಇಸವಿ ಆಗಸ್ಟು ತಾರೀಖು 10ರಲ್ಲಿ ಹರಾಜ್ ಮಾಡಲ್ಪಡುತ್ತೆ.

(2.) ಈ ಬಾಬತು ಹರಾಜ್ ತಾಲ್ಲೂಕು ಕಚೇರಿಯಲ್ಲಿ ದಿವಿ 11 ಘಂಟೆಗೆ ಅಮಲ್‌ದಾರ್ರು ಅಥವಾ ಶಿರಸ್ತೇದಾರ್ರು ಮಾಡಿಸುತ್ತಾರೆ.

(3.) ಇಜಾರೆಯು ಪ್ರತಿಸಾಲ್ ಜುಲೈ ಲಾಗಾಯತು ಬಂದು ವರುಷದ ವರಿಗೆ ಇರತಕ್ಕದ್ದು.

(4.) ಹರಾಜ್ ಕಾಲದಲ್ಲಿ ಸವಾಲ್ ಮಾಡತಕ್ಕವರು ತಮ್ಮ ಸ್ವಂತಕ್ಕೋಸ್ಕರ ಸವಾಲ್ ಮಾಡುತ್ತಾರೋ ಅಥವಾ ಇತರರಿಗೋಸ್ಕರ ಏಜಂಟರಾಗಿ ಸವಾಲ್ ಮಾಡುತ್ತಾರೋ ಆ ಸಂಗತಿಯನ್ನು ತಿಳಿಸಬೇಕು. ಏಜಂಟರು ಸವಾಲ್ ಮಾಡುವದಾದರೆ ತಾವು ಯಾರಿಗೋಸ್ಕರ ಸವಾಲ್ ಮಾಡುತ್ತಾರೋ ಆ ಸಂಗತಿಯನ್ನ ತಿಳಿಸಿ ಅವರಿಂದ ಪಡದುಕೊಂಡಿರುವ ಅಧಿಕಾರ ಪತ್ರಿಕೆಯನ್ನ ಹಾಜರ್ಪಡಿಬೇಕು. ಹಾಗೆ ಮಾಡಲು ತಪ್ಪಿದರೆ ಅವರ ಸವಾಲ್ ತಿರಸ್ಕರಿಸಲ್ಪಡುತ್ತೆ.

(5.) ಚೆಡಸವಾಲ್‌ದಾರನು ಹರಾಜ್ ಕಾಲದಲ್ಲಿ ತನ್ನ ಸವಾಲ್ ಅಂಗೀಕರಿಸಲ್ಪಟ್ಟ ಕೂಡ್ಲೆ ಸವಾಲ್ ಮೊಬಲಗು ಪೈಕಿ ಕೇಕಡಾ 25 ರೂಪಾಯಿ ಪ್ರಕಾರ ಡಿಪಾಜಿಟ್ ಹಾಜರ್ಪಡಿಬೇಕು. ಬಾಕಿ ಮೊಬಲಗನ್ನ ರೂಪಾಯಿ 1ಕ್ಕೆ 1 ಆಣೇ ಮೇರೆ ಲೋಕಲ್‌ಸೆಸ್ ಸಹಿತ ಹರಾಜ್ ಖಾಯಂ ಆದ ಸಂಗತಿ ಬರಹ ಮೂಲಕ ಅಮಲ್‌ದಾರ್‌ರವರಿಂದ ತಿಳಿಸಲ್ಪಟ್ಟ ತಾರೀಖು ಲಾಗಾಯತು 7 ದಿವಸದಲ್ಲಿ ಪಾವತಿ ಮಾಡಬೇಕು. ಡಿಪಾಜಿಟ್ ಕಟ್ಟುವದಕ್ಕೂ ಅಥವಾ ಬಾಕಿ ಮೊಬಲಗನ್ನು ಪಾವತಿ ಮಾಡುವದಕ್ಕೂ ತಪ್ಪಿದರೆ ಈ ಬಾಬು ಪುನಹ ಹರಾಜ್ ಮಾಡಲ್ಪಟ್ಟು ಆದರಿಂದ ಉಂಟಾಗುವ ನಷ್ಟಕ್ಕೆ ಮೊದಲ್ ಸವಾಲ್‌ದಾರನನ್ನ ಗುರಿಮಾಡಲ್ಪಡುತ್ತೆ.